ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗೆ ನಿಗದಿಪಡಿಸಿರುವ ಅನುದಾನದ ಕುರಿತು

ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ):-

811 (900) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿಗೆ ನಿಗದಿಪಡಿಸಲಾಗಿರುವ ಅನುದಾನವೆಷ್ಟು ; ಇಲ್ಲಿಯವರೆಗೂ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಆ) ಬಿಡುಗಡೆಯಾದ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗಿ ;

(ಇ) ಬಾಗಲಕೋಟೆ, ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳ ವ್ಯಾಪ್ತಿಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; ಯಾವ ಉದ್ದೇಶಕ್ಕಾಗಿ ಬಳಸಲಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)